ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ
ಮಲ್ಲೇಶ್ವರಂ, ಬೆಂಗಳೂರು – 560 003

KARNATAKA SCHOOL EXAMINATION AND ASSESSMENT BOARD
Malleshwaram, Bengaluru – 560 003

# ರಾಜ್ಯ ಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆ, ಫೆಬ್ರವರಿ/ಮಾರ್ಚ್ — 2024

# STATE LEVEL SSLC PREPARATORY EXAMINATION, FEBRUARY/MARCH — 2024

**ವಿಷಯ ಸಂಕೇತ : 01-K** **Subject Code : 01-K**

## ವಿಷಯ : ಪ್ರಥಮ ಭಾಷೆ — ಕನ್ನಡ

## Subject : First Language — KANNADA

ದಿನಾಂಕ : 26. 02. 2024 ] [ Date : 26. 02. 2024

ಸಮಯ : ಬೆಳಗ್ಗೆ 10-15 ರಿಂದ ಮಧ್ಯಾಹ್ನ 1-30 ರವರೆಗೆ ] [ Time : 10-15 A.M. to 1-30 P.M.

ಗರಿಷ್ಠ ಅಂಕಗಳು : 100 ] [ Max. Marks : 100

---

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು ಒಟ್ಟು 45 ಪ್ರಶ್ನೆಗಳನ್ನು ಹೊಂದಿದೆ.
2. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
3. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
4. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ : $6 \times 1 = 6$

1. 'ಸೊಗಸಾಗಿ' ಪದವು ಈ ಅವ್ಯಯಕ್ಕೆ ಸೇರಿದೆ

(ಎ) ಸಾಮಾನ್ಯಾರ್ಥಕಾವ್ಯಯ

(ಬಿ) ಅನುಕರಣಾವ್ಯಯ

(ಸಿ) ಕ್ರಿಯಾರ್ಥಕಾವ್ಯಯ

(ಡಿ) ಅವಧಾರಣಾರ್ಥಕಾವ್ಯಯ

2. ದ್ವಿತೀಯಾ ವಿಭಕ್ತಿಯ ಕಾರಕಾರ್ಥ

(ಎ) ಅಧಿಕರಣ

(ಬಿ) ಕರಣಾರ್ಥ

(ಸಿ) ಕರ್ಮಾರ್ಥ

(ಡಿ) ಸಂಬಂಧ

3. 'ವನೌಷಧಿ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ಗುಣ ಸಂಧಿ

(ಬಿ) ಸವರ್ಣದೀರ್ಘ ಸಂಧಿ

(ಸಿ) ಜಶ್ತ್ವ ಸಂಧಿ

(ಡಿ) ವೃದ್ಧಿ ಸಂಧಿ

4. 'ನೆಯ್ದವಸ್ತ್ರ' ಪದವು ಈ ಸಮಾಸಕ್ಕೆ ಸೇರಿದೆ

(ಎ) ಅಂಶಿ ಸಮಾಸ

(ಬಿ) ಕ್ರಿಯಾ ಸಮಾಸ

(ಸಿ) ಗಮಕ ಸಮಾಸ

(ಡಿ) ತತ್ಪುರುಷ ಸಮಾಸ

5. ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅದು

(ಎ) ಮಿಶ್ರವಾಕ್ಯ

(ಬಿ) ಸಾಮಾನ್ಯವಾಕ್ಯ

(ಸಿ) ಸ್ವತಂತ್ರ ವಾಕ್ಯ

(ಡಿ) ಸಂಯೋಜಿತ ವಾಕ್ಯ



BELG-5024

6. ಒಬ್ಬರು ಹೇಳಿದ ಮಾತನ್ನೇ ಯಥಾವತ್ತಾಗಿ ಬರೆಯುವಾಗ ಈ ಚಿಹ್ನೆಯನ್ನು ಬಳಸಲಾಗುವುದು

(ಎ) ವಾಕ್ಯವೇಷ್ಟನ ಚಿಹ್ನೆ

(ಬಿ) ಉದ್ಧರಣ ಚಿಹ್ನೆ

(ಸಿ) ಆವರಣ ಚಿಹ್ನೆ

(ಡಿ) ಭಾವಸೂಚಕ ಚಿಹ್ನೆ

II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ : $4 \times 1 = 4$

7. ಕಳುವ್ಯಾರೆ : ಕಳುಹಿಸಿದ್ದಾರೆ :: ಸಕ್ಕಾರಿ : .......................... .

8. ಅರ್ಕ : ಎಕ್ಕ :: ಕುಠಾರ : .......................... .

9. ಹಾಡಲಿ : ವಿಧ್ಯರ್ಥಕ :: ಹಾಡನು : .......................... .

10. ಕೆನೆಮೊಸರು : ಜೋಡುನುಡಿ :: ಮೊಟ್ಟಮೊದಲು : .................. .

III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : $7 \times 1 = 7$

11. ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರೇನು ?

12. ಉಪದೇಶ ಯಾರ ಕಿವಿಗೆ ನಾಟುವುದಿಲ್ಲ ?

13. ನೈಮಿತ್ತಿಕನು ಸುಕುಮಾರಸ್ವಾಮಿಯ ಬಗ್ಗೆ ಏನು ಹೇಳಿದನು ?

14. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು ?

15. ಕವಿ ಕುವೆಂಪುರವರು ನೋಡಿದ ಅಡಕೆಯ ತೋಟ ಎಲ್ಲಿದೆ ?

16. ದ್ರೋಣನು ಪರಶುರಾಮರ ಬಳಿಗೆ ಏಕೆ ಬಂದನು ?

17. ಪೆರಿಯಾರ್‌ರವರು ಹುಟ್ಟುಹಾಕಿದ ಸಂಘಟನೆಯ ಹೆಸರೇನು ?

BELG-5024

IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : $10 \times 2 = 20$

18. ಲಕ್ಷ್ಮಣನು ಅಣ್ಣನನ್ನು ಹೇಗೆ ಸಂತೈಸಿದನು ?

19. ಶಬರಿಯು ರಾಮಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ತಿಳಿಸಿ.

20. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು ?

21. ಅರಸ ವೃಷಭಾಂಕನು ಯಶೋಭದ್ರೆಯ ಮನೆಗೆ ಬರಲು ಕಾರಣವೇನು ?

22. ಪಾರ್ಥ-ಭೀಮರ ಬಗೆಗೆ ದುರ್ಯೋಧನನ ಅಭಿಪ್ರಾಯವೇನು ?

23. ಪರಶುರಾಮನು ದ್ರೋಣರಿಗೆ ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು ?

24. 'ಅನ್ ಟು ದಿಸ್ ಲಾಸ್ಟ್' ಕೃತಿ ಗಾಂಧೀಜಿಯವರ ಮೇಲೆ ಯಾವ ಪರಿಣಾಮ ಬೀರಿತು ?

25. ಬಾಲಕ ಭಗತ್‌ಸಿಂಗ್‌ನ ತಾಯಿಯ ಕಣ್ಣುಗಳಿಂದ ಧಾರಾಕಾರವಾಗಿ ನೀರು ಹರಿಯಲು ಕಾರಣವೇನು ?

26. 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ ?

27. ಮಲೆನಾಡಿನಲ್ಲಿ ದೀಪದ ಬತ್ತಿಯ ಸಮಸ್ಯೆಯನ್ನು ಹೇಗೆ ಪರಿಹರಿಸಿಕೊಳ್ಳಲಾಯಿತು ?

V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : $2 \times 3 = 6$

28. ವಿ.ಕೃ. ಗೋಕಾಕ್

29. ಕುವೆಂಪು

VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ : $1 \times 3 = 3$

30. ಕದಡಿದ ಸಲಿಲಂ ತಿಳಿವಂ
ದದೆ ತನ್ನಿಂ ತಾನೆ ತಿಳಿದ ದಶವದನಂಗಾ



BELG-5024

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ : 1 × 3 = 3**

31. ಆತನು ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದು ಉತ್ತೀರ್ಣನಾದನು. ಬುದ್ಧಿವಂತರಾದ ಮಕ್ಕಳಿಗೆ ಪರೀಕ್ಷೆಯೊಂದು ಲೆಕ್ಕವೇ ?

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ : 1 × 3 = 3**

32. ದೇಶ ಸುತ್ತಿ ನೋಡು, ಕೋಶ ಓದಿ ನೋಡು.

**ಅಥವಾ**

ಗಿಡವಾಗಿ ಬಗ್ಗದ್ದು, ಮರವಾಗಿ ಬಗ್ಗೀತೆ.



**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 6 × 3 = 18**

33. "ಗುರೂಪದೇಶ ಎಂದರೆ ತಲೆ ನೆರೆಯದೆ ಬರುವ ಮುಪ್ಪು."

34. "ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ."

35. "ಯಾರದು, ಒಳಗೆ ? ಬಾಗಿಲು ತೆಗೆಯಿರಿ."

36. "ಮಾದ್ರಿಯಲೊಂದು ಮಂತ್ರದೊಳಿಬ್ಬರುದಿಸಿದರು"

37. "ಸಮರದೊಳೆನಗಜ್ಜ ಪೇಟೆಮಾವುದು ಕಜ್ಜಂ"

38. "ಉರ್ವಿಯೊಳ್ ಕೌಸಲ್ಯೆ ಪಡೆದ ಕುವರಂ ರಾಮು"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : 1 × 4 = 4**

39. ಕಲುಷಿತವಾದೀ ..............................................

..............................................

..............................................

.............................................. ಮುಟ್ಟೋಣ

**ಅಥವಾ**

ಮತಗಳೆಲ್ಲವೂ ..................................................................

.......................................................................................

.......................................................................................

.................................................................... ಬಿತ್ತೋಣ.

**XI.** ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :

$1 \times 4 = 4$

40. ಬೆಳ್ಳಿಯ ಹಳ್ಳಿಯ ಮೇರೆಯ ಮೀರಿ
ತಿಂಗಳಿನೂರಿನ ನೀರನು ಹೀರಿ
ಆಡಲು ಹಾಡಲು ತಾ ಹಾರಾಡಲು
ಮಂಗಳ ಲೋಕದ ಅಂಗಳಕೇರಿ
ಹಕ್ಕಿ ಹಾರುತಿದೆ ನೋಡಿದಿರಾ ?

**XII.** ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : $2 \times 4 = 8$

41. ಧರ್ಮಬುದ್ಧಿ ಮತ್ತು ದುಷ್ಟಬುದ್ಧಿಯರು ಧರ್ಮಾಧಿಕರಣರ ಬಳಿಗೆ ಬಂದ ಸಂದರ್ಭವನ್ನು ವಿವರಿಸಿ.

ಅಥವಾ

ದುಷ್ಟಬುದ್ಧಿಯ ತಂತ್ರ ಅವನಿಗೆ ತಿರುಗುಬಾಣವಾದ ಬಗೆಯನ್ನು ಕುರಿತು ನಿಮ್ಮ ಮಾತುಗಳಲ್ಲಿ ಬರೆಯಿರಿ.

42. ಹಲಗಲಿ ದಂಗೆಗೆ ಕಾರಣವೇನು ? ಕುಂಪಣಿ ಸರಕಾರ ದಂಗೆಯನ್ನು ನಿಯಂತ್ರಿಸಿದ ಬಗೆಯನ್ನು ವಿವರಿಸಿ.

ಅಥವಾ

ಹಲಗಲಿಯ ಮೇಲೆ ದಂಡು ಹೇಗೆ ದಾಳಿ ಮಾಡಿತು ? ದಾಳಿಯ ಪರಿಣಾಮಗಳೇನು ?

XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :

**1 × 4 = 4 ( 2 + 2 )**

43. ದೇಶದ ಪ್ರಗತಿ, ಜನರ ಉದ್ಧಾರ ಅಸಿ, ಮಸಿ ಮತ್ತು ಕೃಷಿಯನ್ನು ಅವಲಂಬಿಸಿದೆ. ಅಸಿ ಎಂದರೆ ಯುದ್ಧ. ಯುದ್ಧ ಎಂದರೆ ಸೈನಿಕರು. ಸೈನಿಕ ಬಲ ಇದ್ದಾಗ ದೇಶದ ಸಂರಕ್ಷಣೆ ಸಾಧ್ಯ. ಹಾಗೆಯೇ ರಕ್ಷಣೆಗಿಂತ ಮುಖ್ಯವಾದುದು ಮಸಿ. ಮಸಿ ಎಂದರೆ ಶಿಕ್ಷಣ. 'ಪೆನ್ನು ಖಡ್ಗಕ್ಕಿಂತ ಹರಿತ' ಎನ್ನುವ ಗಾದೆ ಇದೆ.

ಅಸಿ, ಮಸಿಗಿಂತ ಮಹತ್ವದ್ದು ಕೃಷಿ. ಕೃಷಿಕ ನಮ್ಮ ನಾಡಿನ ಬೆನ್ನೆಲುಬು. 'ಒಕ್ಕಲಿಗ ಒಕ್ಕದಿರೆ, ಜಗವೆಲ್ಲ ಬಿಕ್ಕುವುದು' ಎನ್ನುವ ಮಾತಿದೆ ಆಹಾರವಿಲ್ಲದೆ ಬರೀ ವೈಜ್ಞಾನಿಕ ಬೆಳವಣಿಗೆಯಿಂದ ಬದುಕಲು ಸಾಧ್ಯವೇ ? ನಾವು ಯಾವ ಕಾರ್ಖಾನೆಯಿಂದಲೂ ಟೊಮೆಟೊ ತಯಾರಿಸಲು, ಅಕ್ಕಿ ಪಡೆಯಲು, ರಾಗಿ ಬೆಳೆಯಲು ಸಾಧ್ಯವಿಲ್ಲ. ಇವಕ್ಕೆಲ್ಲ ಭೂಮಿಯೇ ಬೇಕು. ರೈತನ ಬೆವರು ಭೂಮಿಗೆ ಸುರಿಯಬೇಕು. ಹಾಗಾಗಿ ಸರ್ವಜ್ಞ 'ಕೋಟಿ ವಿದ್ಯೆಗಳಲ್ಲಿ ಮೇಟಿ ವಿದ್ಯೆಯೇ ಮೇಲು, ಮೇಟಿಯಿಂ ರಾಟೆ ನಡೆದುದಲ್ಲದೆ ದೇಶದಾಟವೆ ಕೆಡಗುಂ' ಎಂದಿರುವುದು ಗಮನಾರ್ಹ.

ಕೋಟಿ ವಿದ್ಯೆಗಳಲ್ಲಿ ಮೇಟಿ ವಿದ್ಯೆ ಅಂದರೆ ವ್ಯವಸಾಯವೇ ಮೇಲು. ಈ ವ್ಯವಸಾಯ ಇಲ್ಲದಿದ್ದರೆ ದೇಶದ ಆಟವೇ ನಡೆಯದು. ಆದರೆ ಇಂದು ಕೃಷಿಕರ ಗತಿ ಏನಾಗಿದೆ ? ಅವನು ಒಂದೆಡೆ ನಿಸರ್ಗದ ಜೊತೆ ಸೆಣಸಬೇಕು. ಸಕಾಲಕ್ಕೆ ಸರಿಯಾಗಿ ಮಳೆ ಬರುವುದಿಲ್ಲ, ಉತ್ತಮ ಬೀಜ ಸಿಗುವುದಿಲ್ಲ, ಭೂಮಿ ಬರಡಾಗುತ್ತಿದೆ. ಕ್ರಿಮಿಕೀಟಗಳ ಹಾವಳಿಯಿಂದ ಬೆಳೆಗೆ ವಿವಿಧ ರೀತಿಯ ರೋಗಗಳು ತಗುಲಿ ಬೇಸಾಯವೇ ಬೇಡ ಎನ್ನುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಮತ್ತೊಂದೆಡೆ ತಾನು ಬೆಳೆದ ಬೆಳೆಗೆ ಸರಿಯಾದ ಬೆಲೆ ಸಿಗದೆ

ವ್ಯವಸ್ಥೆಯ ವಿರುದ್ಧವೂ ಕೃಷಿಕ ಹೋರಾಟ ನಡೆಸಬೇಕಾಗಿದೆ. ಆದರೂ ರೈತರು ನಿರಾಶಾವಾದಿಗಳಾಗದೆ ಆಶಾವಾದಿಗಳಾಗಿ ಬಾಳನ್ನು ಸಾಗಿಸುತ್ತಿದ್ದಾರೆ. ಹಾಸಿಗೆ ಇದ್ದಷ್ಟು ಕಾಲು ಚಾಚುತ್ತಿದ್ದಾರೆ.

ಪ್ರಶ್ನೆಗಳು:

ಅ) ಇಂದು ಕೃಷಿಕರು ಎದುರಿಸುತ್ತಿರುವ ಸಮಸ್ಯೆಗಳಾವುವು ?

ಬ) ಸರ್ವಜ್ಞ 'ಕೋಟಿ ವಿದ್ಯೆಗಳಲ್ಲಿ ಮೇಟಿ ವಿದ್ಯೆಯೇ ಮೇಲು' ಎನ್ನಲು ಕಾರಣವೇನು ?

**XIV.** ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ : $1 \times 5 = 5$

44. ನಿಮ್ಮನ್ನು ಹಂಪಾಪುರದ ನಿವಾಸಿ 'ಪೂರ್ಣ' ಎಂದು ಭಾವಿಸಿಕೊಂಡು, ಮೈಸೂರಿನ 'ಕೃಷ್ಣರಾಜೇಂದ್ರ ಮೃಗಾಲಯ'ದ ಭೇಟಿಗೆ ಸಮಯಾವಕಾಶವನ್ನು ಕೋರಿ ಮೃಗಾಲಯದ ವ್ಯವಸ್ಥಾಪಕರಿಗೆ ಪತ್ರವನ್ನು ಬರೆಯಿರಿ.

ಅಥವಾ

ನಿಮ್ಮನ್ನು ರಾಯಚೂರಿನ ಸರ್ಕಾರಿ ಪ್ರೌಢಶಾಲೆಯ 'ರಜನಿ' ಎಂದು ಭಾವಿಸಿಕೊಂಡು, 'ವಿದ್ಯಾಭ್ಯಾಸದ ಪ್ರಗತಿ'ಯನ್ನು ಕುರಿತು ಬಳ್ಳಾರಿಯ ನಿವಾಸಿಯಾದ 'ರತ್ನಮ್ಮ' ಎಂಬ ಹೆಸರಿನ ತಾಯಿಯವರಿಗೆ ಪತ್ರವನ್ನು ಬರೆಯಿರಿ.

**XV.** ಕೆಳಗಿನ ಯಾವುದಾದರೂ ಒಂದು ವಿಷಯಕ್ಕೆ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ : $1 \times 5 = 5$

45. ಸಾವಯವ ಕೃಷಿಯ ಮಹತ್ವ.

ಅಥವಾ

ರಾಷ್ಟ್ರೀಯ ಭಾವೈಕ್ಯ.



BELG-5024